<u>ಸಾಕ್ಷಿಯನ್ನು ದಿಃ 22.09.2021 ರಂದು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.</u>

**<u>ಮುಂದುವರೆದ ಮುಖ್ಯ ವಿಚಾರಣೆ ವಾದಿಗಳ ಪರ – ಶ್ರೀ ಎಸ್ ಎ ಆರ್ ವಕೀಲರಿಂದಃ</u>**

ನಾನು ನನ್ನ ಮುಖ್ಯ ವಿಚಾರಣೆಯ ಬಾಬ್ತು ಪ್ರಮಾಣ ಪತ್ರವನ್ನು ಸಲ್ಲಿಸಿದ್ದು ಅದರಲ್ಲಿ ಬರೆದಿರುವ ವಿಷಯಗಳೆಲ್ಲವೂ ಸತ್ಯವಾಗಿದ್ದು ಅದಕ್ಕೆ ನಾನು ಸಹಿ ಮಾಡಿದ್ದೇನೆ.

ಸರ್ವೆ ನಂ.223/ಪಿ15 ರ ಪಹಣಿ ಪತ್ರಿಕೆಯನ್ನು ನಿಪಿ.1 ಎಂದು, ಸರ್ವೆ ನಂ.483/2 ರ ಪಹಣಿ ಪತ್ರಿಕೆಯನ್ನು ನಿಪಿ.2 ಎಂದು, ಸರ್ವೆ ನಂ.21/ಪಿ4 ರ ಪಹಣಿ ಪತ್ರಿಕೆಯನ್ನು ನಿಪಿ.3 ಎಂದು, ಸರ್ವೆ ನಂ.223/ಪಿ14 ರ ಪಹಣಿ ಪತ್ರಿಕೆಯನ್ನು ನಿಪಿ.4 ಎಂದು, ನಮ್ಮ ಕುಟುಂಬದ ವಂಶವೃಕ್ಷವನ್ನು ವಿವರಿಸುವ ಪ್ರಮಾಣ ಪತ್ರವನ್ನು ನಿಪಿ5 ಎಂದು, ದಾವಾ ಸಿ ಷೆಡ್ಯೂಲ್ ಸ್ವತ್ತಿಗೆಸಂಬಂಧಿಸಿದ 4 ಫೋಟೋಗಳನ್ನು ಹಾಜರು ಪಡಿಸಿದ್ದು ಅವುಗಳನ್ನು ರುಜುವಾತು ಪಡಿಸುವ ಶರತ್ತಿನೊಂದಿಗೆ ಕ್ರಮವಾಗಿ ನಿಪಿ6 ರಿಂದ ನಿಪಿ.9 ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ಇನ್ನೂ ಕೆಲವು ದಾಖಲೆಗಳನ್ನು ಹಾಜರು ಪಡಿಸಲು ವಾದಿಗಳ ಪರ ವಕೀಲರು ಸಮಯಾವಕಾಶ ಕೋರಿದ್ದು ಸಮಯಾವಕಾಶ ನೀಡಲಾಯಿತು).

ನನ್ನ ಉಕ್ತ ಲೇಖನದಂತೆ ಬಹಿರಂಗ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಓ ಹೇ ಕೇ ಸರಿ ಇದೆ.

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆ ಎಂ ಎಫ್ ಸಿ ಹಿರಿಯೂರು.